ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

### ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಭರವಸೆ । ದ್ವಿತೀಯ ಪಿಯು ಇಂಗ್ಲಿಷ್ ಬರೆಯಲೂ ಫ್ರೀ ಬಸ್

# ಪರೀಕ್ಷೆ ಬರೆಯುವ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಉಚಿತ ಬಸ್

■ **ವಿಕ ಸುದ್ದಿಲೋಕ** ಬೆಂಗಳೂರು

ಈ ಬಾರಿಯ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯಲಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಸೌಲಭ್ಯ ಕಲ್ಪಿಸುವ ಮೂಲಕ ಸುಗಮವಾಗಿ ಪರೀಕ್ಷೆ ಬರೆಯಲು ಅನುವು ಮಾಡಿಕೊಡಲಾಗುವುದು ಎಂದು ಸಾರಿಗೆ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದರು.

''ಅಗತ್ಯ ಬಿದ್ದಲ್ಲಿ ಗಡಿ ರಾಜ್ಯದ ಮಕ್ಕಳು ಪರೀಕ್ಷೆಗೆ ಬಂದು ಹೋಗಲು ಅನುವಾಗುವಂತೆ ಗಡಿ ಭಾಗದಿಂದ ಪರೀಕ್ಷಾ ಕೇಂದ್ರದವರೆಗೆ ಬಸ್ ವ್ಯವಸ್ಥೆ ಮಾಡಲಾಗುವುದು,'' ಎಂದು ಭರವಸೆ ನೀಡಿದರು.

ಎಸ್ಸೆಸ್ಸೆಲ್ಸಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಸಾರಿಗೆ ವ್ಯವಸ್ಥೆ ಮಾಡುವ ಸಂಬಂಧ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ಅವರು ಸಾರಿಗೆ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ವಿಧಾನಸೌಧದಲ್ಲಿ ಸಭೆ ನಡೆಸಿದರು.



**ಡಿಸಿಎಂ ಲಕ್ಷ್ಮಣ್ ಸವದಿ ಮತ್ತು ಸಚಿವ ಸುರೇಶ್ ಕುಮಾರ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.**

''ರಾಜ್ಯಾದ್ಯಂತ ಜೂ.25ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ಪ್ರಾರಂಭವಾಗಲಿದೆ. ಮಕ್ಕಳ ಹಿತದೃಷ್ಟಿಯಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ನಡೆಸಲು ಹೈಕೋರ್ಟ್ ಸಮ್ಮತಿಸಿದೆ. ಈ ಹಿನ್ನೆಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಮಾಡಲು ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದೆ. ಆಯಾ ವ್ಯಾಪ್ತಿಯ ಖಾಸಗಿ ವಿದ್ಯಾಸಂಸ್ಥೆಗಳ ವಾಹನಗಳನ್ನು ಇಲಾಖೆ ಪಡೆದುಕೊಂಡಿದೆ. ಪೋಷಕರ ವಾಹನಗಳಲ್ಲಿ ಬರುವ ಮಕ್ಕಳು ಹಾಗೂ ನಿಗದಿತ ಮಾರ್ಗದ ಬಸ್‌ಗಳ ಹೊರತಾಗಿ ಅಗತ್ಯವಿರುವ ಕಡೆಗಳಲ್ಲಿ ಸಾರಿಗೆ ಸಂಸ್ಥೆಯ ವಾಹನಗಳನ್ನು ನೀಡಲು ಸಾರಿಗೆ ಇಲಾಖೆ ಸಹಕರಿಸಬೇಕು,'' ಎಂದು ಸುರೇಶ್ ಕುಮಾರ್ ಕೋರಿದರು.

''ಅಲ್ಲದೆ, ಜೂ.18ರಂದು ದ್ವಿತೀಯ ಪಿಯುಸಿ ಇಂಗ್ಲಿಷ್ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳಿಗೂ ಅಗತ್ಯ ಸಾರಿಗೆ ಸೌಲಭ್ಯ ಕಲ್ಪಿಸಬೇಕು. ನಿಗದಿತ ಮಾರ್ಗಗಳಲ್ಲಿ ಸಂಚರಿಸುವ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಶಾಲಾ ಗುರುತುಪತ್ರ ಇಲ್ಲವೇ, ಪರೀಕ್ಷೆಯ ಹಾಲ್ ಟಿಕೆಟ್ ಆಧಾರದಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣಕ್ಕೆ ಅವಕಾಶ ನೀಡಬೇಕು,'' ಎಂದು ಮನವಿ ಮಾಡಿದರು. ಈ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಡಿಸಿಎಂ ಲಕ್ಷ್ಮಣ ಸವದಿ ಭರವಸೆ ನೀಡಿದರು.

ಸಭೆಯಲ್ಲಿ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿ ಅಂಜುಮ್ ಪರ್ವೇಜ್, ಸಾರಿಗೆ ಆಯುಕ್ತ ಎನ್ ಶಿವಕುಮಾರ್, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಯೋಗಿ ಕಳಸದ್, ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ಸಿ.ಶಿಖಾ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್.ಆರ್.ಉಮಾಶಂಕರ್, ಆಯುಕ್ತ ಡಾ.ಕೆ.ಜಿ.ಜಗದೀಶ್, ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕಿ ಎಂ.ಕನಗವಲ್ಲಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.